ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 224
ಸದಸ್ಯರ ಹೆಸರು : ಶ್ರೀ ಪಿ.ಆರ್. ರಮೇಶ್
(ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ : 02.02.2021
ಉತ್ತರಿಸಬೇಕಾದ ಸಚಿವರು : ನಗರಾಭಿವೃದ್ಧಿ ಸಚಿವರು

	ಪ್ರಶ್ನೆ	ಉತ್ತರ
ಅ)	ಇತ್ತೀಚೆಗೆ ಮೈಸೂರು ಮಹಾನಗರ ಪಾಲಿಕೆಯಲ್ಲಿ ಸರ್ಕಾರದ ನಿಯಮದಂತೆ ಜನಸಂಖ್ಯೆ ಆಧಾರವಾಗಿ ಪೌರಕಾರ್ಮಿಕರನ್ನು ನೇಮಿಸಿಕೊಳ್ಳುವ ಬದಲು ನಿಯಮಗಳನ್ನು ಉಲ್ಲಂಘಿಸಿ ಅಧಿಕ ಪೌರಕಾರ್ಮಿಕರ ಸೇವೆಯನ್ನು ಪಡೆಯಲು ಮುಂದಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು; (ವಿವರ ನೀಡುವುದು)	ಬಂದಿದೆ. ಸರ್ಕಾರದ ಆದೇಶ ಸಂಖ್ಯೆ: ನಅಇ 126 ಟಿಎಂಎಸ್ 2016, ಬೆಂಗಳೂರು, ದಿನಾಂಕ 07/08/2017 ರಂತೆ ಪ್ರತಿ 700 ಜನಸಂಖ್ಯೆಗೊಬ್ಬರಂತೆ ಪೌರ ಕಾರ್ಮಿಕರನ್ನು ನೇಮಿಸಿಕೊಳ್ಳಲು ಅವಕಾಶವಿರುತ್ತದೆ. ಅದರಂತೆ ಮೈಸೂರು ಮಹಾನಗರಪಾಲಿಕೆಗೆ ಮಂಜೂರಾದ ಹಾಗೂ ಕರ್ತವ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರ ವಿವರ ಈ ಕೆಳಕಂಡಂತಿರುತ್ತದೆ. • ಮೈಸೂರು ಮಹಾನಗರಪಾಲಿಕೆಗೆ 700 ಜನಸಂಖ್ಯೆಗೊಬ್ಬರಂತೆ ಮಂಜೂರಾದ ಒಟ್ಟು ಪೌರಕಾರ್ಮಿಕರ ಸಂಖ್ಯೆ: 1474 • ಮೈಸೂರು ಮಹಾನಗರಪಾಲಿಕೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಖಾಯಂ ಪೌರಕಾರ್ಮಿಕರ ಸಂಖ್ಯೆ: 564 • ನೇರ ಪಾವತಿಯಡಿ ಕರ್ತವ್ಯ ನಿರ್ವಹಿಸುತ್ತಿರುವ ಪೌರಕಾರ್ಮಿಕರ ಸಂಖ್ಯೆ: 839 • ಮಂಜೂರಾದ ಹುದ್ದೆಗಳಿಗಿಂತ ಹೆಚ್ಚುವರಿಯಾಗಿ ಕೆಲಸ ನಿರ್ವಹಿಸುತ್ತಿರುವ ಪೌರಕಾರ್ಮಿಕರ ಸಂಖ್ಯೆ: 724 ಮಂಜೂರಾದ ಹುದ್ದೆಗಳಿಗಿಂತ ಹೆಚ್ಚುವರಿಯಾಗಿ ಕೆಲಸ ನಿರ್ವಹಿಸುತ್ತಿರುವ ಪೌರಕಾರ್ಮಿಕರ ಕುರಿತು ಗ್ರೂಪ್ 'ಡಿ' ವೃಂದದ ನೇಮಕಾತಿ ಪ್ರಾಧಿಕಾರಿಯಾದ ಜಿಲ್ಲಾಧಿಕಾರಿಗಳಿಂದ ಸಮಜಾಯಿಷಿ / ವರದಿ ಸಲ್ಲಿಸಲು ಕೋರಲಾಗಿದೆ.

ಆ)	ಮೈಸೂರು ಮಹಾನಗರ ಪಾಲಿಕೆಯಲ್ಲಿ ಸದರಿ ನಿಯಮಬಾಹಿರ ಕಾರ್ಯದಿಂದ ಅನಗತ್ಯ ದುಂದು ವೆಚ್ಚದಿಂದ ಸರ್ಕಾರದ ಬೊಕ್ಕಸಕ್ಕೆ ಸಾರ್ವಜನಿಕರ ತೆರಿಗೆ ಹಣ ಮತ್ತು ಪಾಲಿಕೆಯ ಸಂಪತ್ತಿಗೆ ಹಾನಿಯಾಗುವ ಕುರಿತು ಸರ್ಕಾರ ಚಿಂತನೆ ನಡೆಸಿದೆಯೇ; (ವಿವರ ನೀಡುವುದು)	ಮೈಸೂರು ನಗರವನ್ನು ಪಾರಂಪರಿಕ ನಗರ ಎಂದು ಘೋಷಣೆ ಮಾಡಿದ್ದು, ಪ್ರವಾಸೋದ್ಯಮಕ್ಕೆ ಹೆಚ್ಚಿನ ಒತ್ತು ನೀಡುವ ಸಲುವಾಗಿ ನಗರದ ಸ್ವಚ್ಛತೆಯನ್ನು ಪರಿಣಾಮಕಾರಿಯಾಗಿ ನಿರ್ವಹಿಸುವ ಉದ್ದೇಶದಿಂದ ಮತ್ತು ನಗರದಲ್ಲಿ ಪ್ರತಿ ಮನೆ ಮನೆಗಳಿಂದ ಬೇರ್ಪಡಿಸಿದ ತ್ಯಾಜ್ಯ ವಸ್ತುಗಳನ್ನು ನೇರವಾಗಿ ಪಡೆಯುವ ಸಲುವಾಗಿ ಹೆಚ್ಚಿನ ಪೌರಕಾರ್ಮಿಕರ ಅವಶ್ಯಕತೆ ಇರುತ್ತದೆ. ಮುಂದುವರೆದು, 724 ಮಂದಿ ಹೆಚ್ಚುವರಿಯಾಗಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರಿಗೆ ಪಾಲಿಕೆ ನಿಧಿಯಿಂದಲೇ ವೇತನ ಪಾವತಿಸಲು ಆದೇಶಿಸಿದ್ದು, ಸರ್ಕಾರಕ್ಕೆ ಯಾವುದೇ ರೀತಿ ಆರ್ಥಿಕ ಹೊರೆ ಉಂಟಾಗಿರುವುದಿಲ್ಲ ಹಾಗೂ ಹೊರಗುತ್ತಿಗೆ ಪೌರಕಾರ್ಮಿಕರಿಗೆ ಪಾಲಿಕೆಯಿಂದ ನೇರವಾಗಿ ವೇತನ ಪಾವತಿಸಲು ಅನುಮತಿ ನೀಡಲಾಗಿದ್ದು, ಪ್ರಸ್ತುತ ಚಾಲ್ತಿಯಲ್ಲಿರುವ ಗುತ್ತಿಗೆ ಪದ್ಧತಿಯನ್ನು ರದ್ದುಪಡಿಸುವುದರಿಂದ ಪಾಲಿಕೆಗೆ ವಾರ್ಷಿಕ ರೂ.10.00 ಕೋಟಿಗಳು ಉಳಿತಾಯವಾಗಲಿದೆ.
ಇ)	ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಜನಸಂಖ್ಯೆಗೆ ಅನುಗುಣವಾಗಿ ಪೌರಕಾರ್ಮಿಕರ ಸೇವೆಯನ್ನು ಪಡೆಯುತ್ತಿದ್ದು ಇತರೆ ಮಹಾನಗರ ಪಾಲಿಕೆಗಳು ಈ ರೀತಿಯ ನಿಯಮ ಬಾಹಿರ ಕಾರ್ಯಚಟುವಟಿಕೆಗಳನ್ನು ಕೈಗೊಳ್ಳುವುದನ್ನು ನಿರ್ಬಂಧಿಸುವ ಕುರಿತು ಸರ್ಕಾರದ ಕ್ರಮವೇನು ? (ವಿವರ ನೀಡುವುದು)	ಸರ್ಕಾರದ ಆದೇಶ ಸಂಖ್ಯೆ: ನಅಇ 126 ಟಿಎಂಎಸ್ 2016, ಬೆಂಗಳೂರು, ದಿನಾಂಕ 07/08/2017ರಂತೆ ಪ್ರತಿ 700 ಜನಸಂಖ್ಯೆಗೊಬ್ಬರಂತೆ ಪೌರ ಕಾರ್ಮಿಕರನ್ನು ನೇಮಿಸಿಕೊಳ್ಳಲು ಅವಕಾಶವಿರುತ್ತದೆ. ಮಂಜೂರಾದ ಹುದ್ದೆಗಳಿಗಿಂತ ಹೆಚ್ಚುವರಿಯಾಗಿ ಕೆಲಸ ನಿರ್ವಹಿಸುತ್ತಿರುವ ಪೌರಕಾರ್ಮಿಕರ ಕುರಿತು ಗ್ರೂಪ್ 'ಡಿ' ವೃಂದದ ನೇಮಕಾತಿ ಪ್ರಾಧಿಕಾರವಾದ ಜಿಲ್ಲಾಧಿಕಾರಿಗಳಿಂದ ಸಮಜಾಯಿಷಿ / ವರದಿ ಪಡೆದು ಮುಂದಿನ ಕ್ರಮ ಕೈಗೊಳ್ಳಲಾಗುವುದು.

ನಅಇ 13 ಎಸಿಎಂ 2021 (ಇ)

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು